**All India Radio: Bangalore**
**Regional Bulletin In Kannada**
**24.07.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**24.07.2025 / 2.30 p.m.**
**<><><><>**

ಮುಖ್ಯಾಂಶಗಳು

1. ಮಹದಾಯಿ ವಿವಾದ ; ಗೋವಾ ಮುಖ್ಯಮಂತ್ರಿ ಹೇಳಿಕೆ ಖಂಡಿಸಿದ ರಾಜ್ಯ ಸರ್ಕಾರ - ಬೆಂಗಳೂರಿನಲ್ಲಿ ಕಾಂಗ್ರೆಸ್ ಪ್ರತಿಭಟನೆ
2. ರಾಜ್ಯದಲ್ಲಿ ರಸಗೊಬ್ಬರ, ಬಿತ್ತನೆ ಬೀಜಕ್ಕೆ ಯಾವುದೇ ಕೊರತೆಯಿಲ್ಲ ; ಸಚಿವ ಚಲುವರಾಯಸ್ವಾಮಿ
3. ರಾಜ್ಯದಲ್ಲಿ ಪಿಒಪಿ ಗೌರಿ-ಗಣೇಶ ಮೂರ್ತಿಗಳ ಮಾರಾಟಕ್ಕೆ ಕಡಿವಾಣ ಹಾಕಲು ಸಚಿವ ಈಶ್ವರ್ ಖಂಡ್ರೆ ಸೂಚನೆ
4. ಏಳು ಕೋಟಿ ಜನರ ಜಾತಿಗಣತಿ ೧೫ ದಿನಗಳಲ್ಲಿ ನಡೆಸಲು ಸಾಧ್ಯವೇ -ಬಿಜೆಪಿ ಪ್ರಶ್ನೆ
5. ರೇಣುಕಾಸ್ವಾಮಿ ಹತ್ಯೆ ಪ್ರಕರಣ ; ನಟ ದರ್ಶನ್ ಜಾಮೀನು ಅರ್ಜಿ ತೀರ್ಪು ಕಾಯ್ದಿರಿಸಿದ ಸುಪ್ರೀಂಕೋರ್ಟ್

<><><><>

ಮಹದಾಯಿ ವಿಚಾರದಲ್ಲಿ ವಿಧಾನಸಭೆಯಲ್ಲಿ ಗೋವಾ ಮುಖ್ಯಮಂತ್ರಿ ಪ್ರಮೋದ್ ಸಾವಂತ್ ಹೇಳಿಕೆಯನ್ನು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಖಂಡಿಸಿದ್ದಾರೆ. ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿದ ಅವರು, ಇದು ರಾಜ್ಯದ ಸಂಸದರ ಸ್ವಾಭಿಮಾನದ ಪ್ರಶ್ನೆಯಾಗಿದ್ದು, ೨೮ ಸಂಸದರ, ೧೨ ರಾಜ್ಯಸಭೆ ಸದಸ್ಯರು ಈ ಬಗ್ಗೆ ಧ್ವನಿ ಎತ್ತಬೇಕು ಎಂದು ಆಗ್ರಹಿಸಿದ್ದಾರೆ. ದೆಹಲಿಗೆ ತೆರಳಿ ಪ್ರಧಾನಿ ಜಲಶಕ್ತಿ ಸಚಿವರೊಂದಿಗೆ ಚರ್ಚಿಸುವುದಾಗಿ ತಿಳಿಸಿದ್ದಾರೆ. ಇನ್ನೊಂದೆಡೆ ಬೆಂಗಳೂರಿನಲ್ಲಿ ಕೇಂದ್ರ ಸರ್ಕಾರ ಹಾಗೂ ಗೋವಾ ಸರ್ಕಾರದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ ನಡೆಸಿತು. ಕೇಂದ್ರ ಸಚಿವರ ಹಾಗೂ ಬಿಜೆಪಿ ಸಂಸದರ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಒಕ್ಕೂಟ ವ್ಯವಸ್ಥೆಯಲ್ಲಿ ನಂಬಿಕೆಯಿಲ್ಲದ ಕೇಂದ್ರ ಸರ್ಕಾರ ಎಂದು ಆಕ್ರೋಶ ವ್ಯಕ್ತಪಡಿಸಿದರು.

<><><><>

ರಾಜ್ಯದಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜಕ್ಕೆ ಯಾವುದೇ ಕೊರತೆ ಇಲ್ಲ. ರೈತರು ಆತಂಕ ಪಡುವ ಅಗತ್ಯವಿಲ್ಲ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಈ ಕುರಿತಂತೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಜಿಲ್ಲಾವಾರು ಅವಶ್ಯಕತೆ ಇರುವಷ್ಟು ರಸಗೊಬ್ಬರ ಗೋದಾಮುಗಳಲ್ಲಿದ್ದು, ಶೀಘ್ರದಲ್ಲೇ ರೈತರಿಗೆ ತಲುಪಿಸುವ ಕಾರ್ಯ ನಡೆಯಲಿದೆ. ರೈತ ಸಂಪರ್ಕ ಕೇಂದ್ರಗಳೆದುರು ರೈತರು ಸಾಲುಗಟ್ಟಿ ನಿಲ್ಲಬೇಕಾದ ಅವಶ್ಯಕತೆ ಇಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಪರಿಸರಕ್ಕೆ ಮತ್ತು ಜಲ ಮೂಲಗಳಿಗೆ ಮಾರಕವಾದ ರಾಸಾಯನಿಕ ಬಣ್ಣ ಲೇಪಿತ ಪಿಒಪಿ ಮೂರ್ತಿಗಳ ಬದಲಿಗೆ ಪರಿಸರ ಸ್ನೇಹಿ ಬಣ್ಣ ರಹಿತ ಮಣ್ಣಿನ ಗಣಪ ಮತ್ತು ಗೌರಿಯ ಮೂರ್ತಿಗಳ ಮಾರಾಟಕ್ಕೆ ಉತ್ತೇಜನ ನೀಡಲು ಕ್ರಮವಹಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಿಒಪಿ ಗಣೇಶ ವಿಗ್ರಹಗಳನ್ನು ಕೆರೆ, ಬಾವಿ,

ನದಿಯಲ್ಲಿ ವಿಸರ್ಜಿಸಿದಾಗ ಭಾರ ಲೋಹ ಕರಗಿ ಜನ ಜಾನುವಾರುಗಳ ಆರೋಗ್ಯದ ಮೇಲೆ ಪರಿಣಾಮ ಬೀರುತ್ತದೆ. ಜಲಚರಗಳ ಸಾವಿಗೂ ಕಾರಣವಾಗುತ್ತದೆ. ಹೀಗಾಗಿ ಜನ ಜಾಗೃತಿ ಮೂಡಿಸಲು ಪರಿಸರ ಇಲಾಖೆಗೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

<><><><>

ಏಳು ಕೋಟಿ ಜನರ ಜಾತಿ ಗಣತಿಯನ್ನು ಸರ್ಕಾರ ಕೇವಲ ೧೫ ದಿನಗಳಲ್ಲಿ ಮಾಡಲು ಸಾಧ್ಯವೇ ಎಂದು ಬಿಜೆಪಿ ಪ್ರಶ್ನಿಸಿದೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಈ ಹಿಂದೆ ಜಾತಿಗಣತಿ ನೆಪದಲ್ಲಿ ತೆರಿಗೆದಾರರ ೧೬೫ ಕೋಟಿ ಹಣವನ್ನು ವ್ಯರ್ಥ ಮಾಡಲಾಗಿತ್ತು. ಇದೀಗ ೧೫ ದಿನಗಳಲ್ಲಿ ಏಳು ಕೋಟಿ ಜನರ ಗಣತಿಯನ್ನು ಪೂರ್ಣಗೊಳಿಸಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ.

<><><><>

ಧರ್ಮಸ್ಥಳ ಪ್ರಕರಣ ಕುರಿತಂತೆ ತನಿಖೆಗೆ ವಿಶೇಷ ತನಿಖಾ ತಂಡ ರಚಿಸಿದ್ದು, ಐಪಿಎಸ್ ಅಧಿಕಾರಿ ಸೌಮ್ಯಲತ ಹೊರಗುಳಿಯುವ ವಿಚಾರದ ಬಗ್ಗೆ ಮಾಹಿತಿ ಬಂದಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೆಹಲಿಯಲ್ಲಿ ಹಿಂದುಳಿದ ವರ್ಗಗಳ ಸಲಹಾ ಮಂಡಳಿ ಸಭೆ ನಡೆಯುತ್ತಿದ್ದು, ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ದೆಹಲಿಗೆ ತೆರಳಲಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ರಾಜ್ಯದ ಜನಗಣತಿ ಕುರಿತಂತೆ ಪ್ರತಿಕ್ರಿಯಿಸಿದ ಅವರು, ತಂತ್ರಜ್ಞಾನದ ಮೂಲಕ ೧೬ ದಿನಗಳಲ್ಲಿ ಸಮೀಕ್ಷೆ ಮುಗಿಸಬಹುದು ಎಂದು ಹೇಳಿದ್ದಾರೆ.

<><><><>

ಚಿತ್ರದುರ್ಗ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ನಟ ದರ್ಶನ್ ಜಾಮೀನು ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್ ಆದೇಶ ಕಾಯ್ದಿರಿಸಿದೆ. ೧೦ ದಿನಗಳ ಬಳಿಕ ಜಾಮೀನು ಅರ್ಜಿ ಬಗ್ಗೆ ತೀರ್ಪು ನೀಡುವುದಾಗಿ ನ್ಯಾಯಾಲಯ ತಿಳಿಸಿದೆ. ಇದೇ ವೇಳೆ ರಾಜ್ಯ ಉಚ್ಚ ನ್ಯಾಯಾಲಯ ನೀಡಿದ ಆದೇಶದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದೆ. ದರ್ಶನ್ ಸೇರಿದಂತೆ ಎಲ್ಲ ೧೭ ಆರೋಪಿಗಳು ಜಾಮೀನಿನ ಮೇಲೆ ಹೊರ ಬಂದಿದ್ದು, ಏಳು ಆರೋಪಿಗಳ ಜಾಮೀನು ರದ್ದು ಮಾಡುವಂತೆ ರಾಜ್ಯ ಸರ್ಕಾರ ಸುಪ್ರೀಂಕೋರ್ಟ್‌ಗೆ ಮನವಿ ಮಾಡಿತ್ತು.

<><><><>

ಮಳೆಗಾಲದ ಹಿನ್ನೆಲೆಯಲ್ಲಿ ನಗರದಲ್ಲಿ ಕೊಳಚೆ ನೀರು ಸಂಗ್ರಹವಾದರೆ ಡೆಂಗಿ ಹರಡುವ ಸಾಧ್ಯತೆ ಹೆಚ್ಚಲಿದ್ದು, ಎಲ್ಲೂ ಕೊಳಚೆ ನೀರು ಸಂಗ್ರಹವಾಗದಂತೆ ಎಚ್ಚರವಹಿಸಬೇಕು ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಸೂಚಿಸಿದ್ದಾರೆ. ಯಾದಗಿರಿ ನಗರಸಭೆಯ ಘನತ್ಯಾಜ್ಯ ವಿಲೇವಾರಿ ಘಟಕ ಹಾಗೂ ಜಲಶುದ್ಧೀಕರಣ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲಿಸಿದ ಅವರು ಜನರು ಸ್ವಚ್ಛತೆಗೆ ಆದ್ಯತೆ ನೀಡಬೇಕು. ಡೆಂಗಿ ಕುರಿತು ಜಾಗೃತಿ ಮೂಡಿಸಬೇಕು ಎಂದು ತಿಳಿಸಿದ್ದಾರೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಕೆಲವೆಡೆ ಕಾಡಾನೆಗಳ ಹಾವಳಿ ಮುಂದುವರೆದಿದೆ. ಕಾಡಾನೆ ದಾಳಿಯಿಂದ ಕಾರ್ಮಿಕ ಮಹಿಳೆಯೊಬ್ಬರು ಮೃತಪಟ್ಟಿರುವ ಘಟನೆ ಎನ್.ಆರ್ ಪುರ ತಾಲೂಕಿನ ಬನ್ನೂರು ಗ್ರಾಮದಲ್ಲಿ ನಡೆದಿದೆ. ಹೊನ್ನಾಳಿ ಮೂಲದ ಅನಿತಾ ಎಂಬುವವರು ಇಲ್ಲಿನ ಕಾಫಿ ತೋಟವೊಂದರಲ್ಲಿ ಕೂಲಿ ಕೆಲಸ ಮಾಡುತಿದ್ದು ಕೆಲಸ

ಮುಗಿಸಿ ಮನೆಗೆ ಹಿಂತಿರುಗುವಾಗ ಕಾಡಾನೆ ದಾಳಿ ನಡೆಸಿ ಗಂಭೀರವಾಗಿ ಗಾಯಗೊಂಡಿದ್ದು, ಆಸ್ಪತ್ರೆಗೆ ಸಾಗಿಸುವಾಗ ದಾರಿ ಮಧ್ಯೆ ಮೃತಪಟ್ಟಿದ್ದಾರೆ. ಮೂಡಿಗೆರೆ ತಾಲೂಕಿನ ದುಂಡುಗ, ಹಳಸೆ, ಚಂದ್ರಾಪುರ, ಕಮ್ಮರಗೋಡು ಗ್ರಾಮಗಳ ಸುತ್ತ ಮುತ್ತ ಕಾಡಾನೆಗಳು ಸಂಚರಿಸುತ್ತಿದ್ದು, ಕಾರ್ಮಿಕರು ಸಾರ್ವಜನಿಕರು ಎಚ್ಚರಿಕೆಯಿಂದುರುವಂತೆ ಮೂಡಿಗೆರೆ ವಲಯ ಅರಣ್ಯ ಇಲಾಖೆ ಅಧಿಕಾರಿಗಳು ಮನವಿ ಮಾಡಿದ್ದಾರೆ.

<><><><>

ದಾವಣಗೆರೆ ಜಿಲ್ಲೆಗೆ ಮುಂದಿನ ೨ ದಿನಗಳಲ್ಲಿ ೨ ಸಾವಿರದ ೫೦ ಮೆಟ್ರಿಕ್ ಟನ್ ಯೂರಿಯಾ ಗೊಬ್ಬರ ಪೂರೈಕೆಯಾಗಲಿದ್ದು ರೈತರು ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಸ್ಪಷ್ಟನೆ ನೀಡಿದ್ದಾರೆ. ಪ್ರಸಕ್ತ ಸಾಲಿನ ಕೃಷಿ ಇಲಾಖಾ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಪ್ರಸ್ತುತ ಮಾಯಕೊಂಡ, ಜಗಳೂರು, ಚನ್ನಗಿರಿ, ಹೊನ್ನಾಳಿ ಭಾಗದಲ್ಲಿ ಮೆಕ್ಕೆಜೋಳ ಬೆಳೆಗೆ ಯೂರಿಯಾವನ್ನು ಮೇಲುಗೊಬ್ಬರವಾಗಿ ಬಳಕೆ ಮಾಡುತ್ತಿದ್ದು ಮುಂದಿನ ೧೫ ದಿನಗಳಲ್ಲಿ ಇದು ಪೂರ್ಣಗೊಳ್ಳಲಿದೆ ಎಂದು ತಿಳಿಸಿದ್ದಾರೆ. ರೈತರು ಯೂರಿಯಾ ಗೊಬ್ಬರವನ್ನು ಹೆಚ್ಚು ಬಳಸದೆ ನ್ಯಾನೋ ಯೂರಿಯಾ ಬಳಕೆಗೆ ಮುಂದಾಗಬೇಕು. ನ್ಯಾನೋ ಯೂರಿಯಾ ಬಳಕೆ ಹರಳು ರೂಪದ ಯೂರಿಯಾಕ್ಕಿಂತಲೂ ಹೆಚ್ಚು ಗುಣಮಟ್ಟ, ಸಮೃದ್ಧತೆ ಹೊಂದಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ರಾಜ್ಯದ ಹಲವೆಡೆ ಮಳೆಯಾಗುತ್ತಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆಯಾಗುತ್ತಿದ್ದು, ನದಿಗಳು ಅಪಾಯದ ಮಟ್ಟದಲ್ಲಿ ಹರಿಯುತ್ತಿವೆ. ನೇತ್ರಾವತಿ, ಕುಮಾರಧಾರ, ಫಲ್ಗುಣಿ ನದಿಗಳು ತುಂಬಿ ಹರಿಯುತ್ತಿವೆ. ಸತತ ಮಳೆಯ ಹಿನ್ನೆಲೆಯಲ್ಲಿ ಇಂದು ಕರಾವಳಿಯಾದ್ಯಂತ ರೆಡ್ ಅಲರ್ಟ್ ಘೋಷಿಸಲಾಗಿದೆ. ಮಂಗಳೂರು, ಉಳ್ಳಾಲ, ಮೂಲ್ಕಿ-ಮೂಡುಬಿದಿರೆ, ಬಂಟ್ವಾಳ ಮತ್ತು ಕಡಬ ತಾಲೂಕಿನ ಎಲ್ಲಾ ಪ್ರಾಥಮಿಕ, ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಿಗೆ ಜಿಲ್ಲಾಡಳಿತ ರಜೆ ಘೋಷಿಸಿದೆ. ಸತತ ಮಳೆಯ ಪರಿಣಾಮ ಕಳೆದ ೨೪ ಗಂಟೆಗಳ ಅವಧಿಯಲ್ಲಿ ಜಿಲ್ಲೆಯಲ್ಲಿ ಮೂರು ಮನೆಗಳಿಗೆ ಹಾನಿಯಾಗಿದೆ. ಈ ಪೈಕಿ ಒಂದು ಮನೆ ಸಂಪೂರ್ಣವಾಗಿ ಕುಸಿದಿದೆ. ೩೦ ವಿದ್ಯುತ್ ಕಂಬಗಳು ಮುರಿದು ಬಿದ್ದಿದ್ದು, ೧೧ ವಿದ್ಯುತ್ ಪರಿವರ್ತಕಗಳು ಹಾನಿಗೊಂಡಿವೆ. ಮಡಿಕೇರಿ ಸೇರಿದಂತೆ ಕೊಡಗು ಜಿಲ್ಲೆಯಲ್ಲಿಂದು ಹೆಚ್ಚಿನ ಪ್ರಮಾಣದಲ್ಲಿ ಮಳೆಯಾಗುತ್ತಿದೆ. ಬೆಳಗ್ಗಿನಿಂದಲೇ ಮಡಿಕೇರಿಯಲ್ಲಿ ಧಾರಾಕಾರ ಮಳೆಯಾಗುತ್ತಿದ್ದು, ಸಾಮಾನ್ಯ ಜನಜೀವನ ವ್ಯತ್ಯಯವಾಗಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಳೆಯಾಗುತ್ತಿದ್ದು, ಚಿಕ್ಕಮಗಳೂರು, ಮೂಡಿಗೆರೆ, ಕಳಸ, ಕೊಪ್ಪ, ಶೃಂಗೇರಿ ಸೇರಿದಂತೆ ಜಿಲ್ಲೆಯ ಮಲೆನಾಡು ಅರೆ ಮಲೆನಾಡು ಭಾಗಗಳಲ್ಲಿ ಸಾಧಾರಣದಿಂದ ಹೆಚ್ಚಿನ ಮಳೆಯಾಗುತ್ತಿದೆ.

<><><><>

ರಾಜ್ಯದ ಕಾರವಾರ ಅರ್ಬನ್ ಕೋ ಅಪರೇಟಿವ್ ಬ್ಯಾಂಕ್ ಲಿಮಿಟೆಡ್ ಸಾಕಷ್ಟು ಬಂಡವಾಳ ಮತ್ತು ಲಾಭ ಹೊಂದಿಲ್ಲದ ಕಾರಣ ಅದರ ಪರವಾನಗಿಯನ್ನು ರದ್ದುಗೊಳಿಸಿರುವುದಾಗಿ ರಿಸರ್ವ್ ಬ್ಯಾಂಕ್ ಪ್ರಕಟಿಸಿದೆ. ಆರ್‌ಬಿಐ ಹೇಳಿಕೆಯ ಪ್ರಕಾರ ಬ್ಯಾಂಕಿನ ವ್ಯವಹಾರವನ್ನು ಮುಕ್ತಾಯಗೊಳಿಸಲು ಹಾಗೂ ಬ್ಯಾಂಕಿಗೆ ಅಧಿಕಾರಿಯನ್ನು ನೇಮಿಸಲು ಕರ್ನಾಟಕದ ಸಹಕಾರ ಸಂಘಗಳ ರಿಜಿಸ್ಟರ್‌ಗೆ ಮನವಿ ಮಾಡಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>